ದಿನಾಂಕಃ 06.12.2025 ರಂದು ಪಿ.ಡಬ್ಲ್ಯೂ-1ರವರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲುಃ ಶ್ರೀ ಎಂ.ಎಸ್ ವಕೀಲರಿಂದಃ

4. ದಾವಾ ಸ್ವತ್ತಿಗೆ ಸಂಬಂಧಪಟ್ಟಂತೆ ಸರ್ವೆ ಮಾಡಿಸಿದ್ದೀರ ಎಂದರೆ ಮಾಡಿಸಿರುತ್ತೇನೆ. ಅದನ್ನು ಹಾಜರುಪಡಿಸಿದ್ದೀರ ಎಂದರೆ ಹಾಜರುಪಡಿಸಿರುತ್ತೇನೆ. ನಿಪಿ 4 ರಲ್ಲಿ ಚೆಕ್ಕುಬಂಧಿ ನಮೂದಿಸಿರುವುದಿಲ್ಲ ಎಂದರೆ ಸರಿ. ನಿಪಿ 4 ಮತ್ತು 5ಕ್ಕೂ ದಾವಾ ಸ್ವತ್ತಿಗೂ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಸ.ನಂ.93 ಈಗ 123 ಆಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಸ್ವಾಧೀನದಲ್ಲಿಲ್ಲದಿದ್ದರೂ ಪ್ರತಿವಾದಿಗೆ ತೊಂದರೆ ಕೊಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿರುವ ದಾರಿಗೂ ನನಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

(ಮರು ವಿಚಾರಣೆ ಇಲ್ಲ)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹಾ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ., ಆಲೂರು.